**ಕರ್ನಾಟಕ ವಿಧಾನ ಪರಿಷತ್ತು**
**ನೂರ ಐವತ್ತಾರನೆಯ ಅಧಿವೇಶನ**

# ಕರ್ನಾಟಕ ಅಗ್ನಿಶಾಮಕ ದಳ (ತಿದ್ದುಪಡಿ) ವಿಧೇಯಕ, 2025

**(2025ರ ವಿಧಾನಸಭೆಯ ವಿಧೇಯಕ ಸಂಖ್ಯೆ–42)**

**(ಕರ್ನಾಟಕ ವಿಧಾನಸಭೆಯಿಂದ ಅಂಗೀಕಾರವಾದ ರೂಪದಲ್ಲಿ)**

ಕರ್ನಾಟಕ ಅಗ್ನಿಶಾಮಕ ದಳ ಅಧಿನಿಯಮ, 1964ನ್ನು ಮತ್ತಷ್ಟು ತಿದ್ದುಪಡಿ ಮಾಡಲು ಒಂದು ವಿಧೇಯಕ.

ಇಲ್ಲಿ ಇನ್ನುಮುಂದೆ ಕಂಡುಬರುವ ಉದ್ದೇಶಗಳಿಗಾಗಿ ಕರ್ನಾಟಕ ಅಗ್ನಿಶಾಮಕ ದಳ ಅಧಿನಿಯಮ, 1964ನ್ನು (1964ರ ಕರ್ನಾಟಕ ಅಧಿನಿಯಮ 42), ಮತ್ತಷ್ಟು ತಿದ್ದುಪಡಿ ಮಾಡುವುದು ಯುಕ್ತವಾಗಿರುವುದರಿಂದ;

ಇದು ಭಾರತ ಗಣರಾಜ್ಯದ ಎಪ್ಪತ್ತಾರನೇ ವರ್ಷದಲ್ಲಿ ಕರ್ನಾಟಕ ರಾಜ್ಯ ವಿಧಾನ ಮಂಡಲದಿಂದ ಈ ಮುಂದಿನಂತೆ ಅಧಿನಿಯಮಿತವಾಗಲಿ:-

**1. ಸಂಕ್ಷಿಪ್ತ ಹೆಸರು ಮತ್ತು ಪ್ರಾರಂಭ.-** (1) ಈ ಅಧಿನಿಯಮವನ್ನು ಕರ್ನಾಟಕ ಅಗ್ನಿಶಾಮಕ ದಳ (ತಿದ್ದುಪಡಿ) ಅಧಿನಿಯಮ, 2025 ಎಂದು ಕರೆಯತಕ್ಕದ್ದು.

(2) ಇದು ರಾಜ್ಯ ಸರ್ಕಾರವು ಅಧಿಸೂಚನೆಯ ಮೂಲಕ ಸರ್ಕಾರಿ ರಾಜ್ಯಪತ್ರದಲ್ಲಿ ಗೊತ್ತುಪಡಿಸಬಹುದಾದಂಥ ದಿನಾಂಕದಂದು ಜಾರಿಗೆ ಬರತಕ್ಕದ್ದು.

**2. ಪ್ರಕರಣ 15ರ ತಿದ್ದುಪಡಿ.-** ಕರ್ನಾಟಕ ಅಗ್ನಿಶಾಮಕ ದಳ ಅಧಿನಿಯಮ, 1964 (1964ರ ಕರ್ನಾಟಕ ಅಧಿನಿಯಮ 42)ರ, 15ನೇ ಪ್ರಕರಣದ, (2)ನೇ ಉಪಪ್ರಕರಣದ ತರುವಾಯ, ಈ ಮುಂದಿನ ಪರಂತುಕಗಳನ್ನು ಸೇರಿಸತಕ್ಕದ್ದು, ಎಂದರೆ:-

"ಪರಂತು, ಸದರಿ ಅಧಿನಿಯಮದ 13ನೇ ಪ್ರಕರಣದಲ್ಲಿ ಪರಿಭಾಷಿಸಿರುವಂತೆ ಹೊಸದಾಗಿ ನಿರ್ಮಾಣಗೊಂಡಿರುವ ಬಹುಮಹಡಿ ಕಟ್ಟಡಗಳ(ಎತ್ತರವಾದ ಕಟ್ಟಡಗಳ) ಮೇಲೆ ಸ್ವತ್ತು ತೆರಿಗೆಯ ಶೇಕಡಾ ಒಂದರಷ್ಟು ದರದಲ್ಲಿನ ಅಧಿಭಾರದ (Surcharge) ರೂಪದಲ್ಲಿ, ಕರ್ನಾಟಕ ಅಗ್ನಿಶಾಮಕ ದಳ (ತಿದ್ದುಪಡಿ) ಅಧಿನಿಯಮ, 2025ರ ಪ್ರಾರಂಭದ ದಿನಾಂಕದಿಂದ ಜಾರಿಗೆ ಬರುವಂತೆ ಬೆಂಕಿ ಉಪಕರವನ್ನು ವಿಧಿಸತಕ್ಕದ್ದು:

ಮತ್ತು ಪರಂತು ರಾಜ್ಯ ಸರ್ಕಾರ ಅಥವಾ ಕೇಂದ್ರ ಸರ್ಕಾರದ ಅಥವಾ ರಾಜ್ಯ ಸರ್ಕಾರ ಅಥವಾ ಕೇಂದ್ರ ಸರ್ಕಾರದ ಒಡೆತನದಲ್ಲಿರುವ ಯಾವುದೇ ಸಾರ್ವಜನಿಕ ಪ್ರಾಧಿಕಾರದ ನಿಯಂತ್ರಣ ಅಥವಾ ಸ್ವಾಧೀನದಡಿಯಲ್ಲಿರುವ ಯಾವುದೇ ಕಟ್ಟಡದ ಮೇಲೆ ಬೆಂಕಿ ಉಪಕರವನ್ನು ವಿಧಿಸತಕ್ಕದ್ದಲ್ಲ."

## ಉದ್ದೇಶಗಳು ಮತ್ತು ಕಾರಣಗಳ ಹೇಳಿಕೆ

**(ವಿಧೇಯಕವನ್ನು ಮಂಡಿಸುವಾಗ ಲಗತ್ತಿಸಿದಂತೆ)**

2024-2025ನೇ ವರ್ಷದ ಆಯವ್ಯಯ ಭಾಷಣದ ಖಂಡಿಕೆ 441ರಲ್ಲಿ ಮಾಡಲಾದ ಪ್ರಸ್ತಾವನೆಗಳನ್ನು ಜಾರಿಗೊಳಿಸಲು ಮತ್ತು ಹೊಸದಾಗಿ ನಿರ್ಮಾಣಗೊಂಡಿರುವ ಬಹುಮಹಡಿ ಕಟ್ಟಡಗಳ ಸ್ವತ್ತು ತೆರಿಗೆಯ ಮೇಲೆ ಶೇಕಡಾ ಒಂದರಷ್ಟು ಬೆಂಕಿ ಉಪಕರವನ್ನು ವಿಧಿಸುವ ಮೂಲಕ ಅಗ್ನಿ ಶಾಮಕ ಮತ್ತು ತುರ್ತು ಸೇವೆಗಳ ಇಲಾಖೆಯ ಕಾರ್ಯಕ್ಷಮತೆಯನ್ನು ಹೆಚ್ಚಿಸಲು ಕರ್ನಾಟಕ ಅಗ್ನಿಶಾಮಕ ದಳ ಅಧಿನಿಯಮ, 1964 (1964ರ ಕರ್ನಾಟಕ ಅಧಿನಿಯಮ 42)ರ 15ನೇ ಪ್ರಕರಣವನ್ನು ಮತ್ತಷ್ಟು ತಿದ್ದುಪಡಿ ಮಾಡುವುದು ಅವಶ್ಯಕವೆಂದು ಪರಿಗಣಿಸಲಾಗಿದೆ,-

ಆದ್ದರಿಂದ ಈ ವಿಧೇಯಕ,

## ಆರ್ಥಿಕ ಜ್ಞಾಪನ ಪತ್ರ

ಪ್ರಸ್ತಾವಿತ ಶಾಸನಾತ್ಮಕ ಕ್ರಮದಿಂದ ಯಾವುದೇ ಹೆಚ್ಚಿನ ವೆಚ್ಚವು ಉಂಟಾಗುವುದಿಲ್ಲ.

**ಡಾ. ಜಿ. ಪರಮೇಶ್ವರ**
ಗೃಹ ಮಂತ್ರಿ

**ಕೆ.ಆರ್. ಮಹಾಲಕ್ಷ್ಮಿ**
ಕಾರ್ಯದರ್ಶಿ
ಕರ್ನಾಟಕ ವಿಧಾನ ಪರಿಷತ್ತು

**ಅನುಬಂಧ**

**ಕರ್ನಾಟಕ ಅಗ್ನಿಶಾಮಕ ದಳ ಅಧಿನಿಯಮ, 1964ರ**

**(1964ರ ಕರ್ನಾಟಕ ಅಧಿನಿಯಮ ಸಂಖ್ಯೆ 42) ಉದ್ಧೃತ ಭಾಗ**

**XXX XXX XXX**

**15. ಬೆಂಕಿ ತೆರಿಗೆಯನ್ನು ವಿಧಿಸುವುದು-** (1) ರಾಜ್ಯ ಸರ್ಕಾರವು, ಈ ಅಧಿನಿಯಮವು ಜಾರಿಯಲ್ಲಿರುವಂಥ ಯಾವುದೇ ಪ್ರದೇಶದಲ್ಲಿ ಇರುವಂಥ ಆ ಭೂಮಿಗಳು ಮತ್ತು ಕಟ್ಟಡಗಳ ಮೇಲೆ ಮತ್ತು ಆ ಪ್ರದೇಶದಲ್ಲಿ ಯಾವುದರ ಮೇಲೆ ಯಾವುದೇ ಸ್ಥಳೀಯ ಪ್ರಾಧಿಕಾರವು ಯಾವುದೇ ಹೆಸರಿನಿಂದ ಕರೆಯುವ ಸ್ವತ್ತು ತೆರಿಗೆಯನ್ನು ವಿಧಿಸಿದೆಯೋ ಅದರ ಮೇಲೆ ಬೆಂಕಿ ತೆರಿಗೆಯೆಂದು ಕರೆಯುವ ಉಪಕರವನ್ನು ವಿಧಿಸಬಹುದು.

(2) ಬೆಂಕಿ ತೆರಿಗೆಯನ್ನು ಸ್ವತ್ತು ತೆರಿಗೆಯ ಮೇಲಿನ ಅಧಿಭಾರದ ರೂಪದಲ್ಲಿ ರಾಜ್ಯ ಸಕಾರವು, ಸರ್ಕಾರಿ ರಾಜ್ಯಪತ್ರದಲ್ಲಿ ಅಧಿಸೂಚನೆಯ ಮೂಲಕ ನಿರ್ಧರಿಸಬಹುದಾಂದಥ ಸ್ವತ್ತು ತೆರಿಗೆಯ ಶೇಕಡಾ ಹತ್ತರಷ್ಟು ಮೀರದಂಥ ದರದಲ್ಲಿ ವಿಧಿಸತಕ್ಕದ್ದು.

**XXX XXX XXX**